# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಅಶೋಕ್ ಡಿ.ಗೊಂಡಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಮಗದೂರು ಗ್ರಾಮ ಪಂಚಾಯತಿ, (ಪ್ರಸ್ತುತ ಕುರುಬಮಲ್ಲೂರು ಗ್ರಾಮ ಪಂಚಾಯತಿ) ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-4505/2015/ARLO1, ದಿನಾಂಕ: 23.05.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 18.05.2017 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ನೀಲಪ್ಪ ಮಲ್ಲಪ್ಪ ದೊಡ್ಡಮನಿ, ಸದಸ್ಯರು ಗ್ರಾಮ ಪಂಚಾಯತಿ ನಡಿ ನೀರಲಗಿ, ಹಿರೇಮಗದೂರು ಗ್ರಾಮ ಪಂಚಾಯತಿ, (ಪ್ರಸ್ತುತ ಕುರುಬಮಲ್ಲೂರು ಗ್ರಾಮ ಪಂಚಾಯತಿ) ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ಕೆಳಕಂಡ ಆರೋಪಗಳನ್ನು ಮಾಡಿ ದೂರು ಸಲ್ಲಿಸಿದ್ದು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆ ಕೈಗೊಳ್ಳಲಾಗಿದೆ.

> "2010-11 ರಿಂದ 2015-16 ನೇ ಸಾಲಿನಲ್ಲಿ ವಿದ್ಯುತ್ ಉಪಕರಣಗಳನ್ನು ಖರೀದಿ ಮಾಡಿ, ಬಿಲ್ ಮತ್ತು ವೋಚರ್‌ಗಳನ್ನು ನಿರ್ವಹಿಸಿರುವುದಿಲ್ಲ ಹಾಗೂ 2010-11 ರಿಂದ 2014-15 ನೇ ಸಾಲಿನಲ್ಲಿ ಗ್ರಾಮ ಪಂಚಾಯತಿಯು ಪಡೆದಿರುವ 13 ನೇ ಹಣಕಾಸು ಯೋಜನೆಯ ರೂ.72,15,567/- ಗಳಅನುದಾವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆ. ನಿಯಮಾನುಸಾರ ಶೇ.3 ನ್ನು ವಿಕಚೇತನ ಕಲ್ಯಾಣ ಕಾರ್ಯಕ್ರಮಗಳಿಗೆ ಹಾಗೂ ಶೇ.25 ರಷ್ಟನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಲ್ಯಾಣ ಕಾರ್ಯಕ್ರಮಗಳಿಗೆ ವಿನಿಯೋಗಿಸಿರುವುದಿಲ್ಲ."

ಪ್ರಕರಣದ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾವೇರಿ ಜಿಲ್ಲಾ ಪಂಚಾಯತಿ ಇವರು ವರದಿಯನ್ನು ಸಲ್ಲಿಸಿ, ಸದರಿ ವರದಿಯಲ್ಲಿ ಎದುರುದಾರರು ಕರ್ನಾಟಕ ಪಂಚಾಯತ್ ರಾಜ್ (ಆಯವ್ಯಯ ಮತ್ತು ಲೆಕ್ಕ ಪತ್ರ) ನಿಯಮಗಳು 2006 ರ ನಿಯಮ 21 ರನ್ವಯ ರಸೀದಿ ಪುಸ್ತಕ, ದಾಸ್ತಾನು ವಹಿ ಮತ್ತು ಫಾರಂ 5 ರಲ್ಲಿ ನಗದು ಪುಸ್ತಕಗಳನ್ನು ನಿರ್ವಹಿಸಿರುವುದಿಲ್ಲ. ವಸೂಲಿಯಾದ ಕಂದಾಯದ ಹಣವನ್ನು ತಡವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ. ಶೌಚಾಲಯ ಕಾಮಗಾರಿಗಳಿಗೆ ಉಪಯೋಗಿಸಿದ ಅನುದಾನಕ್ಕೆ ಕೂಲಿಪಟ್ಟಿಯಲ್ಲಿ ಕೂಲಿಕಾರರ ಸಹಿಯನ್ನು ಪಡೆದಿರುವುದಿಲ್ಲ ಹಾಗೂ ಹೆಬ್ಬಟ್ಟಿನ ಗುರುತುಗಳನ್ನು ಧೃಢೀಕರಿಸಿರುವುದಿಲ್ಲ. ವಿದ್ಯುತ್ ಹಾಗೂ ಕುಡಿಯುವ ನೀರಿನ ಉಪಕರಣಗಳ ಖರೀದಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆಯ ನಿಯಮಗಳನ್ನು ಪಾಲಿಸಿರುವುದಿಲ್ಲ ಹಾಗೂ ಈ ಸಂಬಂಧ ದಾಸ್ತಾನು ವಹಿಯನ್ನು ನಮೂದಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮೇಲೆ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಆರೋಪಗಳು ಸಾಬೀತಾಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಹಾಗೂ ಎದುರುದಾರರಾದ ಶ್ರೀ ಅಶೋಕ್ ಡಿ.ಗೊಂಡಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಮಗದೂರು ಗ್ರಾಮ ಪಂಚಾಯತಿ, (ಪ್ರಸ್ತುತ ಕುರುಬಮಲ್ಲೂರು ಗ್ರಾಮ ಪಂಚಾಯತಿ) ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಕರ್ನಾಟಕ ನಾಗರಿಕ ಸೇವೆ(ನಡತೆ) ನಿಯಮಗಳು 1966 ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿತ್ತಾರೆಂದು ಕಂಡುಬಂದಿದ್ದರಿಂದ, ಸದರಿಯವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

*ಮುಂದಿನ ಪುಟಕ್ಕೆ...*

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಅಶೋಕ್ ಡಿ.ಗೊಂಡಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಮಗದೂರು ಗ್ರಾಮ ಪಂಚಾಯತಿ, (ಪ್ರಸ್ತುತ ಕುರುಬಮಲ್ಲೂರು ಗ್ರಾಮ ಪಂಚಾಯತಿ) ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 488 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 09.06.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಅಶೋಕ್ ಡಿ.ಗೊಂಡಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಮಗದೂರು ಗ್ರಾಮ ಪಂಚಾಯತಿ, (ಪ್ರಸ್ತುತ ಕುರುಬಮಲ್ಲೂರು ಗ್ರಾಮ ಪಂಚಾಯತಿ) ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 34 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5. ಕಾರ್ಯನಿರ್ವಾಹಕ ಅಧಿಕಾರಿ, ಸವಣೂರು ತಾಲ್ಲೂಕು ಪಂಚಾಯತಿ, ಸವಣೂರು, ಹಾವೇರಿ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಅಶೋಕ್ ಡಿ.ಗೊಂಡಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಮಗದೂರು ಗ್ರಾಮ ಪಂಚಾಯತಿ, (ಪ್ರಸ್ತುತ ಕುರುಬಮಲ್ಲೂರು ಗ್ರಾಮ ಪಂಚಾಯತಿ) ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ.
7. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.